All India Radio: Bangalore
Regional Bulletin In Kannada
19.06.2025 / 2.30 p.m.
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<><><><>

ಮುಖ್ಯಾಂಶಗಳು

1. ಗೃಹಲಕ್ಷ್ಮಿ ಯೋಜನೆಯ ಫಲಾನುಭವಿಗಳ ಪಟ್ಟಿಯಲ್ಲಿ ಪರಿಷ್ಕರಣೆ ಇಲ್ಲ ; ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್
2. ಭೂಕಬಳಿಕೆ ಆರೋಪ ; ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ವಿರುದ್ಧದ ಎಸ್ಐಟಿ ತನಿಖೆಗೆ ಉಚ್ಚನ್ಯಾಯಾಲಯ ತಡೆಯಾಜ್ಞೆ
3. ಕೇಂದ್ರ ಸಚಿವ ಅಮಿತ್ ಶಾ ಇಂದು ಬೆಂಗಳೂರಿಗೆ ಆಗಮನ ; ನಾಳೆ ಬಿಜಿಎಸ್ ಮೆಡಿಕಲ್ ಕಾಲೇಜು ಲೋಕಾರ್ಪಣೆ
4. ರಾಜ್ಯದ ಯಶಸ್ಸು ಕುಗ್ಗಿಸಲು ಯತ್ನ ; ಅಮೆರಿಕ ಭೇಟಿ ನಿರಾಕರಿಸಿದ ಕೇಂದ್ರ ಸರ್ಕಾರದ ವಿರುದ್ಧ ಸಚಿವ ಪ್ರಿಯಾಂಕ್ ಖರ್ಗೆ ಅಸಮಾಧಾನ
5. ಬೆಳಗಾವಿಯಲ್ಲಿ ಹೆಚ್ಚುತ್ತಿರುವ ಹಲ್ಲೆ ಪ್ರಕರಣ - ಇರಿತ ವಿರೋಧಿ ಘಟಕ ಸ್ಥಾಪಿಸಲು ಪೊಲೀಸ್ ಇಲಾಖೆ ನಿರ್ಧಾರ

<><><><>

ಗೃಹಲಕ್ಷ್ಮಿ ಯೋಜನೆಯ ಫಲಾನುಭವಿಗಳ ಪಟ್ಟಿಯಲ್ಲಿ ಯಾವುದೇ ರೀತಿಯ ಪರಿಷ್ಕರಣೆ ಇಲ್ಲ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಸ್ಪಷ್ಟಪಡಿಸಿದ್ದಾರೆ. ವಿಧಾನಸೌಧದಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಣ ಸಂದಾಯಕ್ಕೆ ತಾಂತ್ರಿಕ ಸಮಸ್ಯೆ ಇಲ್ಲ ಎಂದು ತಿಳಿಸಿದ್ದಾರೆ. ಏಪ್ರಿಲ್ ತಿಂಗಳ ಹಣ ಸಂದಾಯವಾಗಿದ್ದು, ಮೇ ತಿಂಗಳ ಹಣ ವರ್ಗಾವಣೆ ಆಗಬೇಕಿದೆ. ಹಣಕಾಸು ಇಲಾಖೆಯಿಂದ ಹಣ ಬಿಡುಗಡೆಯಾದ ಕೂಡಲೇ ಫಲಾನುಭವಿಗಳ ಖಾತೆಗೆ ಜಮಾ ಮಾಡಲಾಗುವುದು ಎಂದು ಹೇಳಿದ್ದಾರೆ.

<><><><>

ಕೇಂದ್ರ ಸಚಿವ ಹೆಚ್ ಡಿ ಕುಮಾರಸ್ವಾಮಿ ವಿರುದ್ಧದ ಭೂಕಬಳಿಕೆ ಆರೋಪದ ತನಿಖೆ ನಡೆಸುತ್ತಿರುವ ಎಸ್ಐಟಿಗೆ ಉಚ್ಚ ನ್ಯಾಯಾಲಯ ಮಧ್ಯಂತರ ತಡೆಯಾಜ್ಞೆ ನೀಡಿದೆ. ಕೇಂದ್ರ ಸಚಿವ ಕುಮಾರಸ್ವಾಮಿ ತಮ್ಮ ವಿರುದ್ಧದ ಎಸ್ಐಟಿ ತನಿಖೆಯನ್ನು ಪ್ರಶ್ನಿಸಿ ಸಲ್ಲಿಸಿದ್ದ ಅರ್ಜಿಯನ್ನು ವಿಚಾರಣೆ ನಡೆಸಿದ ನ್ಯಾಯಮೂರ್ತಿ ಇ.ಎಸ್. ಇಂದಿರೇಶ್ ನೇತೃತ್ವದ ಪೀಠ ಈ ಆದೇಶ ನೀಡಿದೆ. ಸರ್ಕಾರಿ ಅಧಿಸೂಚನೆಯಿಲ್ಲದೆ ಎಸ್ಐಟಿ ರಚನೆ ಕಾನೂನುಬಾಹಿರ ಎಂದು

ಕುಮಾರಸ್ವಾಮಿ ತಮ್ಮ ಅರ್ಜಿಯಲ್ಲಿ ವಾದಿಸಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಎಸ್‌ಐಟಿ ತೆಗೆದುಕೊಂಡ ಎಲ್ಲಾ ಕ್ರಮಗಳನ್ನು ಅನೂರ್ಜಿತ ಎಂದು ಘೋಷಿಸಬೇಕೆಂದು ಅವರು ನ್ಯಾಯಾಲಯದಲ್ಲಿ ಮನವಿ ಮಾಡಿದ್ದರು. .ಬೆಂಗಳೂರಿನ ಸಮೀಪದಲ್ಲಿರುವ ಬಿಡದಿ ಬಳಿಯ ಕೇತಗಾನಹಳ್ಳಿ ಗ್ರಾಮದಲ್ಲಿ ಭೂಕಬಳಿಕೆ ಆರೋಪದ ತನಿಖೆ ನಡೆಸಲು ರಾಜ್ಯ ಸರ್ಕಾರ ಜನವರಿಯಲ್ಲಿ ಎಸ್‌ಐಟಿ ರಚಿಸಿತ್ತು. ಪ್ರಕರಣದಲ್ಲಿ ಆರು ಎಕರೆ ಅತಿಕ್ರಮಣವನ್ನು ತೆರವುಗೊಳಿಸಲು ತಹಶೀಲ್ದಾರ್ ಆದೇಶ ನೀಡಿದ್ದರು.

<><><><>

ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ಬೆಂಗಳೂರಿಗೆ ಆಗಮಿಸಲಿದ್ದು, ನಾಳೆ ನೆಲಮಂಗಲದ ಸಮೀಪ ನಡೆಯುವ ಬಿಜಿಎಸ್ ಮೆಡಿಕಲ್ ಕಾಲೇಜು ಮತ್ತು ಆಸ್ಪತ್ರೆ ಕಟ್ಟಡದ ಉದ್ಘಾಟನೆ ಕಾರ್ಯಕ್ರಮದಲ್ಲಿ ಭಾಗಿಯಾಗಲಿದ್ದಾರೆ. ಬಡ ಜನರಿಗೆ ಉಚಿತ ವೈದ್ಯಕೀಯ ಚಿಕಿತ್ಸೆ ನೀಡಲಾಗುತ್ತಿರುವ ಬಿಜಿಎಸ್ ಆಸ್ಪತ್ರೆಯನ್ನು ೯೩೦ ಹಾಸಿಗೆಗಳ ಬಹು ವಿಶೇಷ ಆಸ್ಪತ್ರೆಯನ್ನಾಗಿ ವಿಸ್ತರಿಸಲಾಗಿದೆ. ಆಸ್ಪತ್ರೆಯು ವಿಶೇಷ ತೀವ್ರ ನಿಗಾಘಟಕ ಹಾಗೂ ಅತ್ಯಾಧುನಿಕ ವೈದ್ಯಕೀಯ ಸೇವೆ ಒದಗಿಸಲಿದೆ. ಸಮಾರಂಭದಲ್ಲಿ ಕೇಂದ್ರ ಸಚಿವರಾದ ಹೆಚ್.ಡಿ. ಕುಮಾರಸ್ವಾಮಿ, ವಿ. ಸೋಮಣ್ಣ, ಸಚಿವ ಶರಣಪ್ರಕಾಶ್ ಸೇರಿದಂತೆ ಹಲವು ಗಣ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ.

<><><><>

ಕರ್ನಾಟಕದ ಯಶಸ್ಸನ್ನು ಕುಗ್ಗಿಸಲು ಕೇಂದ್ರ ಸರ್ಕಾರ ಪ್ರಯತ್ನಿಸುತ್ತಿದೆ ಎಂದು ಮಾಹಿತಿ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿಂದು ಅಮೆರಿಕ ಭೇಟಿಗೆ ಕೇಂದ್ರ ಸರ್ಕಾರ ಅನುಮತಿ ನಿರಾಕರಿಸಿರುವ ಕುರಿತಂತೆ ಪ್ರತಿಕ್ರಿಯಿಸಿದ ಅವರು, ಕೇಂದ್ರ ಸರ್ಕಾರ ಸೂಕ್ತ ಕಾರಣಗಳನ್ನು ನೀಡುವಂತೆ ಆಗ್ರಹಿಸಿದ್ದಾರೆ. ಕೇಂದ್ರ ಸರ್ಕಾರವು ಅಮೆರಿಕ ಭೇಟಿಗೆ ನಿರಾಕರಿಸಿರುವುದು ತಮಗೆ ಮಾಡಿರುವ ಅನ್ಯಾಯವಾಗಿದೆ ಎಂದು ದೂರಿದ್ದಾರೆ. ಉದ್ಯೋಗ ಸೃಷ್ಟಿಸುವ ಉದ್ದೇಶದಿಂದ ವಿದೇಶಗಳಿಗೆ ಭೇಟಿ ನೀಡುತ್ತಿದ್ದು, ರಾಜ್ಯಕ್ಕೆ ಹೂಡಿಕೆಗಳ ಒಳ ಹರಿವು ಖಚಿತಪಡಿಸಿಕೊಳ್ಳುವುದು ತಮ್ಮ ಜವಾಬ್ದಾರಿಯಾಗಿದೆ ಎಂದು ಪ್ರತಿಪಾದಿಸಿದ್ದಾರೆ.

<><><><>

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪ್ರಾಕೃತಿಕ ವಿಕೋಪದಿಂದ ಸಂತ್ರಸ್ತರಾದವರಿಗೆ ಆದಷ್ಟು ಶೀಘ್ರ ಪರಿಹಾರ ಧನ ವಿತರಿಸುವಂತೆ ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ. ಮಂಗಳೂರಿನ ಪಡೀಲ್‌ನಲ್ಲಿರುವ ಜಿಲ್ಲಾಧಿಕಾರಿ ಕಚೇರಿ ಪ್ರಜಾಸೌಧದಲ್ಲಿ ಮಳೆ ಹಾನಿ ಕುರಿತು ಜಿಲ್ಲೆಯ ಉನ್ನತ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಯಾವುದೇ ಕಾರಣಕ್ಕೂ ಪರಿಹಾರ ಧನ ವಿತರಣೆಯಲ್ಲಿ ವಿಳಂಬವಾಗಬಾರದು ಎಂದು ಸೂಚಿಸಿದ್ದಾರೆ. ಒಂದು ವೇಳೆ ಅಧಿಕಾರಿಗಳು ನಿರ್ಲಕ್ಷ್ಯ ವಹಿಸುವುದು ಕಂಡು ಬಂದರೆ ಅಂತಹ ಅಧಿಕಾರಿಗಳ ವಿರುದ್ಧ ಕ್ರಮ

ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ. ಜಿಲ್ಲೆಯಲ್ಲಿ ೮೨ ಮನೆಗಳು ಸಂಪೂರ್ಣ ಹಾನಿಗೀಡಾಗಿದ್ದು, ೭೦೫ ಮನೆಗಳಿಗೆ ಭಾಗಶಃ ಹಾನಿಯಾಗಿದೆ. ಬಹುತೇಕ ಪ್ರಕರಣಗಳಲ್ಲಿ ಪರಿಹಾರ ಪಾವತಿ ಆಗಿದೆ. ಆದರೆ ಪುತ್ತೂರಿನಲ್ಲಿ ೨೫ ಮನೆಗಳಿಗೆ ಪರಿಹಾರ ಪಾವತಿ ಬಾಕಿ ಇದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

<><><><>

ಬೆಳಗಾವಿಯಲ್ಲಿ ಜನರು ಚಾಕು ಮತ್ತು ಆಯುಧಗಳನ್ನು ಸಾಗಿಸುವುದನ್ನು ತಡೆಯಲು ಇರಿತ ವಿರೋಧಿ ಘಟಕ ಸ್ಥಾಪಿಸುವುದಾಗಿ ಬೆಳಗಾವಿ ಪೊಲೀಸ್ ಆಯುಕ್ತ ಭೂಷಣ್ ಗುಲಾಬ್ ರಾವ್ ಬೊರಾಸೆ ಘೋಷಿಸಿದ್ದಾರೆ. ಬೆಳಗಾವಿಯಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಸ್ಸಿನ ಕಿಟಕಿಯ ಸೀಟಿಗಾಗಿ ಇಬ್ಬರು ಅಪ್ರಾಪ್ತರು ಜಗಳವಾಡಿ ಪರಸ್ಪರ ಇರಿದುಕೊಂಡಿರುವುದನ್ನು ಗಂಭೀರವಾಗಿ ಪರಿಗಣಿಸಲಾಗಿದೆ ಎಂದು ತಿಳಿಸಿದ್ದಾರೆ. ಜೊತೆಗೆ ಚಿಕ್ಕಮಕ್ಕಳು ಹಗಲು ಹೊತ್ತಿನಲ್ಲಿ ಚಾಕು ಹಾಗೂ ಇತರ ಆಯುಧ ಹಿಡಿದುಕೊಂಡು ತಿರುಗಾಡುತ್ತಿರುವುದು ಬೆಳಕಿಗೆ ಬಂದಿದೆ. ಈ ಹಿನ್ನೆಲೆಯಲ್ಲಿ ಇರಿತ ವಿರೋಧಿ ಘಟಕ ಸ್ಥಾಪಿಸಿ ೫ ರಿಂದ ೬ ಪೊಲೀಸ್ ಸಿಬ್ಬಂದಿ ಸಾರ್ವಜನಿಕ ಪ್ರದೇಶಗಳಲ್ಲಿ ಗಸ್ತು ತಿರುಗಲಿದೆ ಎಂದು ಮಾಹಿತಿ ನೀಡಿದ್ದಾರೆ. ಇದೇ ವೇಳೆ ಕಾನೂನಿನೊಂದಿಗೆ ಆಟವಾಡಲು ಪ್ರಯತ್ನಿಸಬೇಡಿ ಎಂದು ಪೋಷಕರಿಗೂ ಬೊರಾಸೆ ಎಚ್ಚರಿಕೆ ನೀಡಿದ್ದಾರೆ.

<><><><>

ಇದೇ ೨೧ರಂದು ವಿಶ್ವಾದ್ಯಂತ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ನಡೆಯಲಿದ್ದು, ರಾಜ್ಯಾದ್ಯಂತ ಸಕಲ ಸಿದ್ಧತೆ ಕೈಗೊಳ್ಳಲಾಗುತ್ತಿದೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಸಿದ್ಧತೆಗಳನ್ನು ಕೈಗೊಳ್ಳಲಾಗುತ್ತಿದ್ದು, ದೊಡ್ಡಬಳ್ಳಾಪುರದಲ್ಲಿ ವಿಶ್ವ ಯೋಗ ದಿನಾಚರಣೆ ಸಮಿತಿ ವತಿಯಿಂದ ಯೋಗ ದಿನಾಚರಣೆ ಅಂಗವಾಗಿ ಯೋಗ ಮತ್ತು ಪ್ರಾಣಾಯಾಮ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ. ದಾವಣಗೆರೆ ಜಿಲ್ಲಾಡಳಿತ ಮತ್ತು ಜಿಲ್ಲಾ ಆಯುಷ್ ಇಲಾಖೆ ಹಾಗೂ ವಿವಿಧ ಸಂಘ ಸಂಸ್ಥೆಗಳ ಸಹಯೋಗದಲ್ಲಿ ಯೋಗ ದಿನಾಚರಣೆ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಗಂಗಾಧರ ಸ್ವಾಮಿ ತಿಳಿಸಿದ್ದಾರೆ. ಈ ಕುರಿತು ಆಕಾಶವಾಣಿಯೊಂದಿಗೆ ಮಾತನಾಡಿದ ಅವರು, ೪ ಸಾವಿರಕ್ಕೂ ಅಧಿಕ ಯೋಗಾಸಕ್ತರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದು, ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್.ಮಲ್ಲಿಕಾರ್ಜುನ ಉದ್ಘಾಟಿಸಲಿದ್ದಾರೆ ಎಂದು ಹೇಳಿದ್ದಾರೆ.

ಧ್ವನಿ : ಡಾ. ಗಂಗಾಧರ ಸ್ವಾಮಿ

<><><><>

ಇದೇ ೨೧ ರಂದು ಆಚರಿಸಲಾಗುವ ೧೧ನೇ ಅಂತಾರಾಷ್ಟ್ರೀಯ ಯೋಗ ದಿನದ ಅಂಗವಾಗಿ ಬೆಂಗಳೂರಿನ ರಾಷ್ಟ್ರೀಯ ಮಾನಸಿಕ ಆರೋಗ್ಯ ಮತ್ತು ನ್ಯೂರೋಸೈನ್ಸ್ ಸಂಸ್ಥೆ- ನಿಮ್ಹಾನ್ಸ್, ಯೋಗದ ಮೂಲಕ ಮಾನಸಿಕ ಆರೋಗ್ಯ ಉತ್ತೇಜಿಸುವ ಉದ್ದೇಶದ ಕಾರ್ಯಕ್ರಮಗಳನ್ನು

ಆಯೋಜಿಸಿದೆ. ಅಂದು ಬೆಳಗ್ಗೆ ೭ ರಿಂದ ೮ ಗಂಟೆಯವರೆಗೆ ನಿಮ್ಹಾನ್ಸ್ ಜಿಮ್ಖಾನಾ ಮೈದಾನದಲ್ಲಿ ಸಾಮೂಹಿಕ ಯೋಗ ಕಾರ್ಯಕ್ರಮ ಯೋಗ ಸಂಗಮ ನಡೆಯಲಿದೆ. ಬಳಿಕ ೯ ರಿಂದ ೧೦ ಗಂಟೆಯವರೆಗ ರೋಗಿಗಳಿಗೆ ಶಾರೀರಿಕ ಮತ್ತು ಮಾನಸಿಕ ಕ್ಷೇಮಾಭಿವೃದ್ಧಿಗೆ ಪೂರಕವಾಗುವ ವಿಶೇಷ ಯೋಗ ಅಧಿವೇಶನ ನಡೆಸಲು ಯೋಜಿಸಲಾಗಿದೆ. ಬಳಿಕ ನಿಮ್ಹಾನ್ಸ್‌ನ ವಿವಿಧ ವಿಭಾಗಗಳ ತಜ್ಞರು ಹಿರಿಯರ ಮಾನಸಿಕ ಆರೋಗ್ಯದಲ್ಲಿ ಯೋಗ ಮತ್ತು ಜೀವನಶೈಲಿಯ ಮಹತ್ವದ ಕುರಿತು ವಿಚಾರ ವಿನಿಮಯ ನಡೆಸಲಿದ್ದಾರೆ.

<><><><>

ಇಸ್ರೇಲ್ ವಿದೇಶಾಂಗ ವ್ಯವಹಾರಗಳ ಸಚಿವಾಲಯ ನಾಗರಿಕ ನಾಯಕತ್ವ, ನೀತಿ ನಿರೂಪಣೆ ಮತ್ತು ಸುಸ್ಥಿರ ಅಭಿವೃದ್ಧಿ ಕುರಿತು ಅಧ್ಯಯನ ನಡೆಸಲು ಆಯೋಜಿಸಿದ್ದ ೭ ದಿನಗಳ ಅಧ್ಯಯನ ಪ್ರವಾಸದಲ್ಲಿ ಬಿ.ಪ್ಯಾಕ್‌ನ ಹದಿನೆಂಟು ಪ್ರತಿನಿಧಿಗಳು ತೆರಳಿದ್ದರು. ಈ ನಿಯೋಗವು ಜೋರ್ಡಾನ್‌ನಿಂದ ವಿಮಾನ ಏರಿದ್ದು, ನಾಳೆ ಬೆಂಗಳೂರು ತಲುಪಲಿದೆ.

<><><><>

ಕೃಷ್ಣಾ ನದಿ ಪಾತ್ರದಲ್ಲಿ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ಯಾದಗಿರಿ ಜಿಲ್ಲೆಯ ಹುಣಸಗಿ ತಾಲ್ಲೂಕಿನ ನಾರಾಯಣಪುರ ಗ್ರಾಮದ ಬಸವಸಾಗರ ಜಲಾಶಯಕ್ಕೆ ಹೆಚ್ಚಿನ ಪ್ರಮಾಣದ ನೀರು ಹರಿದು ಬರುತ್ತಿದೆ. ಇಂದು ಬೆಳಗ್ಗೆ ೨೫ ಗೇಟ್‌ಗಳ ಮೂಲಕ ೭೫ ಸಾವಿರದ ೧೫ ಕ್ಯುಸೆಕ್ ನೀರನ್ನು ಕೃಷ್ಣಾ ನದಿಗೆ ಹರಿಸಲಾಗಿದೆ ಎಂದು ಅಣೆಕಟ್ಟೆ ವಿಭಾಗದ ಅಧಿಕಾರಿಗಳು ತಿಳಿಸಿದ್ದಾರೆ.

<><><><>

ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಅತಿಸಾರದಿಂದ ಮಕ್ಕಳ ಮರಣವನ್ನು ಶೂನ್ಯಕ್ಕೆ ತರುವುದನ್ನು ಗುರಿಯಾಗಿಸಿ ಡಯೇರಿಯಾ ತಡೆಗಟ್ಟುವಿಕೆ ಅಭಿಯಾನವನ್ನು ಜುಲೈ ೩೧ ರವರೆಗೆ ಜಿಲ್ಲೆಯಾದ್ಯಂತ ಹಮ್ಮಿಕೊಳ್ಳಲಾಗಿದೆ.

<><><><>

ಸಂಕ್ಷಿಪ್ತ ಸುದ್ದಿಗಳು

1. ಮಂಡ್ಯ ನಗರದ ಸ್ಥಳೀಯ ಸಂಸ್ಥೆಗಳು ತಮ್ಮ ವ್ಯಾಪ್ತಿಯಲ್ಲಿ ಸರ್ವೆ ನಡೆಸಿ ವಸತಿ ಮತ್ತು ನಿವೇಶನ ರಹಿತರ ಪಟ್ಟಿಯನ್ನು ಸಿದ್ಧ ಪಡಿಸಿ ಎಂದು ಜಿಲ್ಲಾಧಿಕಾರಿ ಡಾ ಕುಮಾರ ಸೂಚಿಸಿದ್ದಾರೆ.
2. ದಕ್ಷಿಣ ಕನ್ನಡ ಜಿಲ್ಲೆಯ ಜಿಲ್ಲಾಧಿಕಾರಿಯಾಗಿದ್ದ ಮುಲ್ಲೈ ಮುಗಿಲನ್ ಅವರನ್ನು ವರ್ಗಾವಣೆ ಮಾಡಲಾಗಿದ್ದು, ನೂತನ ಜಿಲ್ಲಾಧಿಕಾರಿಯಾಗಿ ನಿಯುಕ್ತಿಗೊಂಡಿರುವ ದರ್ಶನ್ ಎಚ್.ವಿ ಅಧಿಕಾರ ಸ್ವೀಕರಿಸಿದ್ದಾರೆ.

3. ಯುವಕರು ಹಿರಿಯ ನಾಗರಿಕರನ್ನು ಸದಾ ಗೌರವದಿಂದ ಕಾಣಬೇಕು. ಹಿರಿಯರು ತಮ್ಮ ಎಲ್ಲಾ ಆಸ್ತಿಯನ್ನು ಮಕ್ಕಳಿಗೆ ಧಾರೆ ಎರೆಯಬೇಡಿ ಎಂದು ಯಾದಗಿರಿ ಜಿಲ್ಲೆಯ ಶಹಾಪುರದ ಹೆಚ್ಚುವರಿ ನ್ಯಾಯಾಲಯದ ನ್ಯಾಯಾಧೀಶ ಬಸವರಾಜ್ ಸಲಹೆ ನೀಡಿದ್ದಾರೆ.

4. ಮೈಸೂರಿನ ತಿ. ನರಸೀಪುರ ತಾಲ್ಲೂಕು ಬನ್ನೂರು ಹೋಬಳಿ ವ್ಯಾಪ್ತಿಯ ಚಾಮನಹಳ್ಳಿ ಕೆರೆಗೆ ಮೈಸೂರು ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಕ ಅಧಿಕಾರಿ ಯುಕೇಶ್ ಕುಮಾರ್ ಭೇಟಿ ನೀಡಿ ರೋಹು ತಳಿ ಮೀನುಮರಿಗಳ ಬೆಳವಣಿಗೆಯನ್ನು ಪರಿಶೀಲಿಸಿದರು.

5. ಒತ್ತಡದ ಕಾರ್ಯನಿರ್ವಹಣೆ ಮಧ್ಯದಲ್ಲಿಯೇ ತಮ್ಮ ವೈಯಕ್ತಿಕ ಆರೋಗ್ಯದ ಬಗ್ಗೆ ಕಾಳಜಿ ವಹಿಸುವಂತೆ ವಿಜಯಪುರ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಅಧಿಕಾರಿ-ನೌಕರರು ಕರೆ ನೀಡಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>